# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ದಾವಣಗೆರೆ ಜಿಲ್ಲೆ, ಹರಪನಹಳ್ಳಿ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆಗೆ (ಪರಿಷ್ಕೃತ) ಸರ್ಕಾರದ ಅಂತಿಮ ಅನುಮೋದನೆ ನೀಡುವ ಕುರಿತು.

ಓದಲಾಗಿದೆ:1) ಸರ್ಕಾರದ ಆದೇಶ ಸಂ.ನಅಇ 48 ಬೆಂರೂಪ್ರಾ 2009, ದಿ:01-06-2009.

2) ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರು, ದಾವಣಗೆರೆ ಇವರ ಪತ್ರ ಸಂ.ನಗ್ರಾಯೋದಾ/ಹ.ಹಳ್ಳಿ/ಸ್ಥ.ಯೋ.ಪ್ರ/ಮ.ಯೋ(ಅಂ)/2011-12/ 322, ದಿ:26-10-2011 ಹಾಗೂ ದಿ:4-7-2012.

3) ನಿರ್ದೇಶಕರು, ನಗರ ಯೋಜನಾ ಇಲಾಖೆ ಇವರ ಏಕ ಕಡತ ಸಂ.ನಯೋ(13)/ಜಂನಿ(ಕೇ.ಕಾ)ಮಯೋ(ಪರಿಷ್ಕೃತ)ಅಂತಿಮ/75/2011-12 ದಿ: 23.11.2011.

****

**ಪ್ರಸ್ತಾವನೆ:**

ಮೇಲೆ ಕ್ರ.ಸಂ.(1)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ದಾವಣಗೆರೆ ಜಿಲ್ಲೆಯ ಹರಪನಹಳ್ಳಿ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆಗೆ (ಪರಿಷ್ಕೃತ) ಸರ್ಕಾರದ ತಾತ್ಕಾಲಿಕ ಅನುಮೋದನೆಯನ್ನು ನೀಡಲಾಗಿದೆ.

ಮೇಲೆ ಕ್ರ.ಸಂ.(2)ರಲ್ಲಿ ಓದಲಾದ ಪತ್ರದಲ್ಲಿ ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರು, ದಾವಣಗೆರೆ ಇವರು ಹರಪನಹಳ್ಳಿ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆಗೆ (ಪರಿಷ್ಕೃತ) ನಕ್ಷೆ ಹಾಗೂ ವರದಿಯನ್ನು ತಯಾರಿಸಿ ಪ್ರಾಧಿಕಾರದ ಸಭೆಯಲ್ಲಿ ಮಂಡಿಸಿ, ಶಿಫಾರಸ್ಸಿನೊಂದಿಗೆ ಸರ್ಕಾರದ ಅಂತಿಮ ಅನುಮೋದನೆಗೆ ಸಲ್ಲಿಸಿರುತ್ತಾರೆ.

ಮೇಲೆ ಕ್ರ.ಸಂ.(3)ರಲ್ಲಿ ಓದಲಾದ ನಗರ ಯೋಜನಾ ನಿರ್ದೇಶಕರ ಕಛೇರಿಯ ಏಕ ಕಡತದಲ್ಲಿ ಹರಪನಹಳ್ಳಿ ಪಟ್ಟಣದ ಜನಸಂಖ್ಯೆಯು 2021 ರಲ್ಲಿ 85,000 ಗಳಷ್ಟು ಬೆಳವಣಿಗೆಯಾಗುವುದಾಗಿ ಅಂದಾಜಿಸಿ ಮಹಾ ಯೋಜನೆ (ಪರಿಷ್ಕೃತ) ಯನ್ನು ತಯಾರಿಸಲಾಗಿದೆ. ಹರಪನಹಳ್ಳಿ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ 1575.00 ಹೆಕ್ಟೇರ್ ವಿಸ್ತೀರ್ಣದಲ್ಲಿ 699.75 ಹೆಕ್ಟೇರ್ ಪ್ರದೇಶವನ್ನು ನಗರೀಕರಣದ ಎಲ್ಲೆಯೆಂದು ಪ್ರಸ್ತಾಪಿಸಿ ಮಹಾ ಯೋಜನೆ (ಪರಿಷ್ಕೃತ) ಯನ್ನು ರೂಪಿಸಲಾಗಿದೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 12 ರಲ್ಲಿನ ಅಂಶಗಳನ್ನು ಪರಿಗಣಿಸಿ, ಹರಪನಹಳ್ಳಿ ಪಟ್ಟಣದ ಮುಂದಿನ ಯೋಜಿತ ಬೆಳವಣಿಗೆಗಳಿಗಾಗಿ ಪ್ರಸ್ತಾಪಿಸಿರುವ ಪ್ರದೇಶದಲ್ಲಿ ವಸತಿಗಾಗಿ 338.26 ಹೆಕ್ಟೇರ್ (ಶೆ.48.34), ವಾಣಿಜ್ಯಕ್ಕಾಗಿ 21.63 ಹೆಕ್ಟೇರ್ (ಶೆ.3.09), ಕೈಗಾರಿಕೆಗಾಗಿ 19.61 ಹೆಕ್ಟೇರ್ (ಶೇ.2.80) ಸಾರ್ವಜನಿಕ / ಅರೆ ಸಾರ್ವಜನಿಕ ಉಪಯೋಗಕ್ಕಾಗಿ 58.56 ಹೆಕ್ಟೇರ್ (ಶೇ.8.38), ಉದ್ಯಾನವನ / ಬಯಲು ಜಾಗಗಳಿಗೆ 64.12 ಹೆಕ್ಟೇರ್ (ಶೇ.9.16) ಹಾಗೂ ಸಾರಿಗೆ ಸಂಪರ್ಕ ವಲಯಕ್ಕಾಗಿ 196.15 ಹೆಕ್ಟೇರ್ (ಶೇ.28.03) ಮತ್ತು ಜಲಾವೃತ್ತ ಪ್ರದೇಶವಾಗಿ 1.42 ಹೆಕ್ಟೇರ್ (ಶೇ.0.20), ಪ್ರದೇಶವನ್ನು ನಿಗದಿಪಡಿಸಲಾಗಿದೆ. ಮಹಾಯೋಜನೆಯನ್ನು ಅನುಷ್ಠಾನಗೊಳಿಸಲು ಅಗತ್ಯವಿರುವ ವಲಯ ನಿಯಮಾವಳಿಗಳನ್ನು ರೂಪಿಸಲಾಗಿದ್ದು, ಸದರಿ ಮಹಾ ಯೋಜನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 13(3)ರನ್ವಯ ಸರ್ಕಾರದ ಅಂತಿಮ ಅನುಮೋದನೆ ನೀಡುವಂತೆ ನಗರ ಯೋಜನಾ ನಿರ್ದೇಶಕರು, ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

-2

ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕುಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ನಅಇ 249 ಬೆಂರೂಪ್ರಾ 2011, ಬೆಂಗಳೂರು, ದಿನಾಂಕ: 19.10.2012**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ದಾವಣಗೆರೆ ಜಿಲ್ಲೆ – ಹರಪನಹಳ್ಳಿ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆಗೆ (ಪರಿಷ್ಕೃತ) ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 13(3)ರನ್ವಯ ಸರ್ಕಾರದ ಅಂತಿಮ ಅನುಮೋದನೆಯನ್ನು ನೀಡಲಾಗಿದೆ.

ಮಹಾ ಯೋಜನೆಗೆ ಅಂತಿಮ ಅನುಮೋದನೆ ನೀಡಿದ ಗುರುತಾಗಿ ವರದಿ ಹಾಗೂ ನಕ್ಷೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ
(ಟಿ.ಎಂ.ವಾಸುದೇವ ರಾವ್)
ಸರ್ಕಾರದ ಅಧೀನ ಕಾರ್ಯದರ್ಶಿಗಳು,
ನಗರಾಭಿವೃದ್ಧಿ ಇಲಾಖೆ.

ಇವರಿಗೆ,
ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ ಪ್ರಕಟಣೆಗಾಗಿ ಹಾಗೂ ಪ್ರಕಟಿಸಿದ 100 ಪ್ರತಿಗಳನ್ನು ನಗರಾಭಿವೃದ್ಧಿ ಇಲಾಖೆಗೆ ಕಳುಹಿಸಲು ಕೋರಿದೆ.

ಪ್ರತಿ:
1) ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ಬೆಂಗಳೂರು.
2) ಮುಖ್ಯಾಧಿಕಾರಿಗಳು/ ಸದಸ್ಯ ಕಾರ್ಯದರ್ಶಿ, ಪುರಸಭಾ ಯೋಜನಾ ಪ್ರಾಧಿಕಾರ, ಹರಪನಹಳ್ಳಿ.
3) ಸರ್ಕಾರದ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ, ಬೆಂಗಳೂರು.
4) ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರು, ದಾವಣಗೆರೆ.
5) ಕರ್ನಾಟಕ ರಾಜ್ಯಪತ್ರ.
6) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.